ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ವಿಜ್ಞಾನ ತಂತ್ರಜ್ಞಾನ ಇಲಾಖೆಯ ಅಧೀನದಲ್ಲಿ ಬರುವ ನಿಗಮಗಳ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ) -

11 (86) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು, ಮತ್ತು ಸೊಸೈಟಿಗಳು ಯಾವುವು; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ/ಪ್ರಾಯೋಜಿತ/ಇತರೆ ಯೋಜನೆಗಳಾವುವು; ಸದರಿ ಯೋಜನೆಗಳಿಗೆ 2019-20ನೇ ಸಾಲಿನಲ್ಲಿ ಎಷ್ಟು ಹಣ ಬಂದಿದೆ; ಇನ್ನೂ ಎಷ್ಟು ಹಣ ಬರಬೇಕಿದೆ; (ಯೋಜನಾವಾರು ಮಾಹಿತಿ ನೀಡುವುದು)

(ಈ) ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ನಿಶ್ಚಿತ ಠೇವಣಿ ಇಟ್ಟಿವೆ; ನಿಶ್ಚಿತ ಠೇವಣಿ ಇಡಲು ಕಾರಣಗಳೇನು; ಈ ಹಣವನ್ನು ಯಾವಾಗ ಉಪಯೋಗಿಸಲಾಗುವುದು? (ಸಂಸ್ಥೆವಾರು ಮಾಹಿತಿ ನೀಡುವುದು)